ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ತರೀಕೆರೆತಾಲ್ಲೂಕಿನ ಗುಡ್ಡದಮಲ್ಲೇನಹಳ್ಳಿ ಕೆರೆಗೆ ಭದ್ರಾ ಜಲಾಶಯ ಬಲದಂಡೆ ನಾಲೆಯಿಂದ ಕುಡಿಯುವ ನೀರಿಗಾಗಿ 4 ಕ್ಯುಸೆಕ್ಸ್ ನೀರನ್ನು ಉಪಯೋಗಿಸಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ.

ಆ) ಯೋಜನೆಯ ಅಂದಾಜುಪಟ್ಟಿಯನ್ನು ತಯಾರಿಸಲಾಗುತ್ತಿದೆ.

ಇ) ಯೋಜನೆ ಇನ್ನೂ ಮಂಜೂರಾಗಿರುವುದಿಲ್ಲ.

ಅಜ್ಜಂಪುರ ಪ್ರಥಮ ದರ್ಜೆ ಕಾಲೇಜಿಗೆ ಕಟ್ಟಡ

734 (811) ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಮಾರು 15 ವರ್ಷಗಳಾದರೂ ಅಜ್ಜಂಪುರದ ಪ್ರಥಮ ದರ್ಜೆ ಕಾಲೇಜಿಗೆ ಕಟ್ಟಡ ಇಲ್ಲದಿರುವುದು

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು):

ಅ) ಹೌದು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ನಿರ್ಮಾಣವನನು ಹಾಗೂ ಈಗಾಗಲೇ ಕಟ್ಟಡ ನಿರ್ಮಾಣ ಪ್ರಾರಂಭಗೊಂಡಿರುವ ಕಾಲೇಜುಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹುಡ್ಕೋ ಸಂಸ್ಥೆಯಿಂದ ರೂ. 187 1.00 ಲಕ್ಷಗಳ ನೆರವನ್ನು ಪಡೆಯಲು ನಿರ್ಧರಿಸಲಾಗಿದೆ.

ಶಾಲಾ ಪರಿವೀಕ್ಷಕರ ಹುದ್ದೆಗಳ ರದ್ದತಿ

735(817) ಶ್ರೀ ನಂಜಯ್ಯಮಠ ಎಸ್. ಜಿ (ಗುಶೇದ ಗುಡ್ಡ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಶಾಲಾ ಪರಿವೀಕ್ಷಕರ ಹುದ್ದೆಗಳನ್ನು ಸರ್ಕಾರ ರದ್ದು ಮಾಡಿದೆಯೇ?

2. ಮಾಡಿದ್ದಲ್ಲಿ ಕಾರಣ ಏನು? ಮತ್ತೆ ಪ್ರಾರಂಭಿಸುವುದೆ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

1. ಮಾಡಿರುವುದಿಲ್ಲ. ಶಾಲಾ ಸಂಯೋಜನಕರು ಎಂದು ಪದನಾಮಕರಿಸಿದೆ.

2. ಪ್ರಶ್ನೆ ಉದ್ಭವಿಸುವುದಿಲ್ಲ.